# ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ, ಬೆಂಗಳೂರು

# Karnataka Real Estate Regulatory Authority, Bengaluru

ನಂ: 1/14, ನೆಲಮಹಡಿ, ಸಿಲ್ವರ್ ಜ್ಯೂಬಿಲಿ ಬ್ಲಾಕ್, ಯುನಿಟ ಬಿಲ್ಡಿಂಗ್ ಹಿಂಭಾಗ, ಸಿ.ಎಸ್.ಐ.ಕಾಂಪೌಂಡ್,
3ನೇ ಕ್ರಾಸ್, ಮಿಷನ್ ರಸ್ತೆ, ಬೆಂಗಳೂರು-560027.

ಉಪಸ್ಥಿತರು: ಕೆ. ಪಾಲಾಕ್ಷಪ್ಪ, ನ್ಯಾಯ ನಿರ್ಣಯಾಧಿಕಾರಿಗಳು

ದಿನಾಂಕ: 26 ನೇ ಮೇ 2020

NOT AN OFFICIAL COPY

| | |
|---|---|
| ಫಿರ್ಯಾದು ಸಂಖ್ಯೆ : | **CMP/191103/0004609** |
| ಫಿರ್ಯಾದುದಾರರು : | **SUPRIYA SINGH**<br>**W/o Shashank Mauli Singh,**<br>**No. 34 6th Cross, Mallappa Layout, Near Canopy Apartments,**<br>**Babusapalya, BLR,**<br>**Bengaluru – 560043.**<br>**Rep. by: Sri. Shankar.B, Advocate.** |
| ಎದುರಿದಾರರು : | **SHRIRAM CHIRPING WOODS**<br>**Shrivision Homes Pvt. Ltd.,**<br>**No 40/43, 8th Main, 4th Cross,**<br>**Sadashiv Nagar**<br>**Bengaluru – 560080.**<br>**Rep. by: Sri. Hegde Prakash. R, Advocate.** |

"ತೀರ್ಪು"

ಫಿರ್ಯಾದುದಾರರಾದ **SUPRIYA SINGH** ಇವರು ಎದುರಿ ಡೆವಲಪರ್ ವಿರುದ್ಧ ಈ ಫಿರ್ಯಾದನ್ನು ರೇರಾ ಕಾಯ್ದೆ ಕಲಂ 31 ರಂತೆ ಸಲ್ಲಿಸಿರುತ್ತಾರೆ. ಎದುರಿ ಡೆವಲಪರ್ ಅಭಿವೃದ್ಧಿಪಡಿಸುತ್ತಿರುವ **SHRIRAM CHIRPING WOODS** ಇದರಲ್ಲಿ ಗ್ರಾಹಕರಾಗಿರುತ್ತಾರೆ. ಅವರ ಫಿರ್ಯಾದಿನಲ್ಲಿರುವ ಅವರು ಕೇಳಿರುವ ಪರಿಹಾರವು ಹೀಗೆ ಇರುತ್ತದೆ.

> *It is submitted that complainant executed the sale agreement on 12th day of December, Year two thousand eighteen (12/12/2018) at Bengaluru, as per the agreement respondent stated that complainant has paid booking amount 100, 0000.00 / (rupees Ten lakhs only) paid to the respondent and respondent has stated completion and handover date as 31/3/2019 of the Villament unit 12.03.01 (Shriram chirping woods project) schedule C UNIT. All that Residential Villament bearing NO. 12.03.01 IN 5th and 6th Floor of Tower twelve in the building 3 in "Shriam chirping woods project" containing DUPLEX Three Bedrooms and one*

NOT AN OFFICIAL COPY

*entertainment Room, area of 176.91 Square Meters/1904.24 Square Feet and SBP 246.17 Square METERS/2650 SQUARE FEET ( which includes proportionate share in common areas such as passages ,lobbies, lifts and staircases) with exclusive right to use of 18.64 Square Meters/200.59 Square feet of exclusive balcony and 34.84 square Meters/375 Square feet of exclusive Terrace and 2 covered car parking space, as per the ANNEXURE 1 AND ANNEXURE 2 of Sale Agreement. Complainant has paid payments to respondent as per demand and complainant has sent many mail to the respondent regarding delay in handing over the Villament unit 12.03.01, respondent has not responded even single mail regarding delay and complaint has asked for the delay interest as per the sale agreement. Since respondent has not replied, further complainant had submitted through writing with RPAD to representation regarding the handing over the Villament Unit along with delay interest. I hereby enclosed copies of representation dated 16/08/2019 and 14/09/2019. Since respondent intentionally, without valid reason, making delay in handing over the possession of my Villament Unit, as per the RERA agreement respondent has to handover the possession by 31/03/2019 but till today complainant have communicated several representation via mail and through RPAD, respondent has negligently avoided and still no responses given by the respondent on delay interest. As per demand note raised by the respondent complaint has paid as per the Annexure 1 and Annexure 2 in sale agreement in total sum of 1,50,35,890 and respondent, as per the RERA Agreement, should have had handed over the unit possession by 31/03/2019. Till today seven months delay accorded by the respondent and same has to pay monthly 1,54,000/- per month in the part of delayed interest amount, hence respondent has violated the terms and conditions of the RERA Agreement.*

*Relief Sought from RERA : DELAY COMPENSATION A/W HAND OVER POSITION*

2. ಫಿರ್ಯಾದನ್ನು ನೋದಾಯಿಸಿಕೊಂಡು ಎದುರಿಗೆ ನೋಟಿಸ್ ನೀಡಲಾಯಿತು. ಪ್ರಕರಣವನ್ನು ಕರೆಸಿದಾಗ ಫಿರ್ಯಾದುದಾರರ ಪರ ಶ್ರೀ. ಶಂಕರ್.ಬಿ ವಕೀಲರು ಹಾಜರಾಗಿ ವಕಾಲತ್ ಹಾಕಿದ್ದಾರೆ. ಡೆವಲಪರ್ ಪರ ಶ್ರೀ. ಹೆಗ್ಡೆ ಪ್ರಕಾಶ್ ಆರ್. ವಕೀಲರು ಹಾಜರಾಗಿ ವಕಾಲತ್ ಹಾಕಿದ್ದಾರೆ.

NOT AN OFFICIAL COPY

3. ಡೆವಲಪರ್ ಪರ ನಿಯಮ 30 ರಂತೆ ಮೆಮೋ ಸಲ್ಲಿಸಿ ಫಿರ್ಯಾದುದಾರರು ಸಲ್ಲಿಸಿರುವ ಫಿರ್ಯಾದು ರೇರಾ ನಿಯಮ 30 ರಂತೆ ಇರುವುದಿಲ್ಲ ಅಂತ ಹೇಳುತ್ತಾರೆ. ಅದರ ಮೇಲೆ ವಾದ ಕೇಳಿದ ನಂತರ ದಿನಾಂಕ:09/01/2020ರಂದು ಅದನ್ನು ವಜಾ ಮಾಡಿ ವಾದಕ್ಕೆಂದು ಇಡಲಾಯಿತು.

4. ವಾದವನ್ನು ಕೇಳಿದ್ದೇನೆ.

5. ಈಗ ನನ್ನ ಮುಂದೆ ನಿರ್ಣಯಕ್ಕೆ ಬಂದಿರುವ ಸಂಗತಿ ಎಂದರೆ,
   a. ಫಿರ್ಯಾದುದಾರರು ಸಲ್ಲಿಸಿರುವ ಫಿರ್ಯಾದಿನಲ್ಲಿರುವ ಪರಿಹಾರಕ್ಕೆ ಅರ್ಹರಿರುತ್ತಾರೆಯೇ?
   b. ಅದಕ್ಕೆ ಉತ್ತರ ಸಕಾರಾತ್ಮಕವಾಗಿ ಈ ಕೆಳಕಂಡ ಕಾರಣಗಳಿಗಾಗಿ

## ಕಾ ರ ಣ ಗ ಳು

2. ಮೇಲಿನ ಫಿರ್ಯಾದನ್ನು ಓದಿಕೊಂಡಾಗ ಮತ್ತು ಫಿರ್ಯಾದುದಾರರು ಹಾಗೂ ಡೆವಲಪರ್ ಇವರು ಹಾಜರು ಪಡಿಸಿರುವ ದಾಖಲೆಗಳನ್ನು ನೋಡಿಕೊಂಡಾಗ ಫಿರ್ಯಾದುದಾರರು ಡೆವಲಪರ್ ಇವರ ಗ್ರಾಹಕರು ಎನ್ನುವುದರಲ್ಲಿ ವಿವಾದಗಳಿಲ್ಲ. ಫಿರ್ಯಾದುದಾರರು ತಮ್ಮ ಫಿರ್ಯಾದಿನಲ್ಲಿ ತಾನು ಕೊಟ್ಟಿರುವ ಹಣಕ್ಕೆ ವಿಳಂಬ ಪರಿಹಾರವನ್ನು ಮತ್ತು ಸ್ವಾಧೀನ ಕೊಡಿಸಬೇಕೆಂದು ಕೇಳುತ್ತಾರೆ. ಫಿರ್ಯಾದುದಾರರು ಎದುರಿ ಡೆವಲಪರ್ ಇವರು ಅಭಿವೃದ್ಧಿಪಡಿಸುತ್ತಿರುವ ಪ್ರಾಜೆಕ್ಟ್‌ನಲ್ಲಿ *Apartment No. 12.03.01* ಅನ್ನು ಖರೀದಿಸಲು ಒಪ್ಪಿಕೊಂಡು ದಿನಾಂಕ: 12/12/2018ರಲ್ಲಿಯೇ ಒಪ್ಪಂದ ಪತ್ರವನ್ನು ಮಾಡಿಕೊಂಡಿರುತ್ತಾರೆ. 31/03/2019ರಂದು ಡೆವಲಪರ್ ಇವರು ಪ್ರಾಜೆಕ್ಟ್ ಅನ್ನು ಮುಕ್ತಾಯಗೊಳಿಸಿ ಸ್ವಾಧೀನ ಕೊಡಬೇಕಿತ್ತು. ಆದರೆ ಡೆವಲಪರ್ ಆ ರೀತಿ ನಡೆದುಕೊಂಡಿಲ್ಲ. ಆದ್ದರಿಂದ ಫಿರ್ಯಾದುದಾರರು ತಮಗೆ ಪರಿಹಾರ ಬರಬೇಕು ಅಂತ ಹೇಳುತ್ತಾರೆ. ರೇರಾ ಕಾಯ್ದೆ ಕಲಂ 18 ಪ್ರಕಾರ ಒಪ್ಪಂದ ಪತ್ರದಲ್ಲಿ ತೋರಿಸಿದ ದಿನಾಂಕಕ್ಕೆ ಪ್ರಾಜೆಕ್ಟ್ ಅನ್ನು ನಿಗದಿತ ಅವಧಿಯೊಳಗೆ ಮುಕ್ತಾಯಪಡಿಸಲು ಡೆವಲಪರ್ ಇವರು ವಿಫಲರಾದಲ್ಲಿ ಅವರು ಫಿರ್ಯಾದುದಾರರಿಗೆ *Refund* ಕೊಡಬೇಕು ಅಥವಾ ಹಣವನ್ನು ಹಿಂದಿರುಗಿಸಬೇಕಾಗುತ್ತದೆ. ರೇರಾ ಕಾಯ್ದೆ ಕಲಂ 18ರ ಪ್ರಕಾರ ಯಾವುದೇ ಒಬ್ಬ ಗ್ರಾಹಕ ಪ್ರಾಜೆಕ್ಟ್ ನಿಂದ ಹೊರಗೆ ಹೋಗುತ್ತಾನೆ ಎಂದರೆ ಅವರಿಗೆ ಅವರ ಹಣವನ್ನು ವಾಪಾಸ್ ಕೊಡಬೇಕು ಜೊತೆಗೆ ಪರಿಹಾರವನ್ನು ಕೂಡಾ ಕೊಡಬೇಕು ಅಂತ ಹೇಳುತ್ತಾರೆ. ಆದ್ದರಿಂದ ರೇರಾ ಕಾಯ್ದೆ ಕಲಂ 18ರಂತೆ ಪರಿಹಾರ ಪಡೆಯಲು ಅರ್ಹರಿರುತ್ತಾರೆ.

26/05/2020

NOT AN OFFICIAL COPY

6. ಇನ್ನು ಡೆವಲಪರ್ ಪರ ವಕೀಲರು ಈ ಫಿರ್ಯಾದಿನ ಬಗ್ಗೆ ಕೆಲವು ತಾಂತ್ರಿಕ ಕಾರಣಗಳ ಬಗ್ಗೆ ಹೇಳುತ್ತಾರೆ. ನಿಯಮ 30 ರ ಪ್ರಕಾರ ಸಲ್ಲಿಸಿರುವ ಈ ಫಿರ್ಯಾದನ್ನು *Summary trial* ಅಂತ ವಿಚಾರಣೆ ಮಾಡಬೇಕಾಗುತ್ತದೆ. ಹಾಗಾಗಿ ಇಂತಹ ಫಿರ್ಯಾದುಗಳಿಗೆ *Pleading* ತತ್ವ ಅನ್ವಯವಾಗುವುದಿಲ್ಲ. ಅದಕ್ಕೂ ಮಿಗಿಲಾಗಿ ಇಂತಹ ಫಿರ್ಯಾದುಗಳನ್ನು ರೇರಾ ಕಾಯ್ದೆ ಕಲಂ 71(2)ರ ಪ್ರಕಾರ 60 ದಿನಗಳೊಳಗಾಗಿ ಇತ್ಯರ್ಥ ಪಡಿಸಬೇಕಾಗಿದೆ. ಆ ಹಿನ್ನೆಲೆಯನ್ನು ಗಮನದಲ್ಲಿಟ್ಟುಕೊಂಡಾಗ ನಿಯಮ 30 ರಲ್ಲಿ ಫಿರ್ಯಾದನ್ನು ಹೇಗೆ ನಡೆಸಿಕೊಳ್ಳಬೇಕೆನ್ನುವುದರ ಬಗ್ಗೆ ಬರೆಯಲಾಗಿದೆ. ನಿಯಮ 30(2) ಅನ್ನು ನೋಡಿಕೊಂಡಾಗ ಅದರಲ್ಲಿ ಹೀಗೆ ಬರೆಯಲಾಗಿದೆ.

> *(e). In case the adjudicating officer is satisfied on the basis of the submission made that the complainant does not require any further enquiry it may dismiss the complaint;*
>
> *(f). In case the adjudicating officer is satisfied on the basis of the submission made that there is need for further hearing in to the complaint it may order production of documents or other evidence on a date and time fixed by him;*
>
> *(g). the adjudicating officer shall have the power to carry out an enquiry into the complaint on the basis of documents and submission;*
>
> *(h). the adjudicating officer shall have the power to summon and enforce the attendance of any person acquainted with the facts and circumstances of the case to give evidence or to produce any documents which in the opinion of the adjudicating officer, may be useful for or relevant to the subject matter of the enquiry, and in taking such evidence, the adjudicating officer shall not be bounded to observed the provisions of the Indian Evidence Act, 1872 (Central Act 11 of 1872);*

7. ಈ ಮೇಲಿನ 4 ನಿಯಮಗಳನ್ನು ನೋಡಿಕೊಂಡಾಗ ವಿಚಾರಣೆಯನ್ನು ಯಾವ ಯಾವ ರೀತಿಯಲ್ಲಿ ನಡೆಸಬೇಕೆಂಬುದನ್ನು ನ್ಯಾಯ ನಿರ್ಣಯಾಧಿಕಾರಿಯ ವಿವೇಚನೆಗೆ ಬಿಡಲಾಗಿದೆ. ಅವರು ಅಗತ್ಯ ಬಿದ್ದಲ್ಲಿ ಸಾಕ್ಷಿದಾರರ ವಿಚಾರಣೆ ಮಾಡಬಹುದಾಗಿದೆ. ನಿಯಮ 30(2)(*e*)(*f*)ನಲ್ಲಿರುವ ಅಂಶಗಳನ್ನು ಗಮನಿಸಿಕೊಂಡರೆ ಪಕ್ಷಕಾರರು ಹಾಜರು ಪಡಿಸಿರುವ ದಾಖಲೆಗಳು ಅಥವಾ ಅವರು ಮಾಡಿರುವ ಮನವಿ ಮತ್ತು ಅವರು ನೀಡಿದ ದಾಖಲೆಗಳ ಪ್ರಕಾರ ಪ್ರಕರಣವನ್ನು ಇತ್ಯರ್ಥಪಡಿಸಬಹುದಾಗಿದೆ. ತೀರಾ ಅನಿವಾರ್ಯವಾದರೆ ಮಾತ್ರ ಸಾಕ್ಷ್ಯವನ್ನು ಬರೆದುಕೊಳ್ಳಬಹುದಾಗಿದೆ.

NOT AN OFFICIAL COPY

8. ರೇರಾ ಕಾಯ್ದೆ ಕಲಂ 35(2) ರ ಪ್ರಕಾರ ಹೋದರೆ ಈ ಪ್ರಾಧಿಕಾರವು ಕೂಡಾ *CPC* ಯಲ್ಲಿರುವ ಅಂಶವನ್ನು ಬಳಸಿಕೊಳ್ಳಬಹುದಾಗಿದೆ. ಆದರೆ ಅದಕ್ಕೂ ಕೂಡಾ ಒಂದು ಮಿತಿ ಇದೆ. ಆ ಹಿನ್ನೆಲೆಯಲ್ಲಿ ಡೆವಲಪರ್ ಪರ ಮಾಡಿದ ವಾದವನ್ನು ಒಪ್ಪಿಕೊಳ್ಳಲಾಗದು. ಡೆವಲಪರ್ ಪರ ವಕೀಲರು ತಮ್ಮ ಮತ್ತು ಫಿರ್ಯಾದುದಾರರ ನಡುವೆ ನಡೆದಿರುವ ಒಪ್ಪಂದ ಪತ್ರವು ರೇರಾ ಕಾಯ್ದೆ ಜಾರಿಗೆ ಬರುವ ಮೊದಲೇ ನಡೆದಿರುತ್ತದೆ, ಆದ್ದರಿಂದ ಫಿರ್ಯಾದುದಾರರು ಕೇಳಿದ ಪರಿಹಾರವನ್ನು ಕೊಡಲು ಬರುವುದಿಲ್ಲ ಅಂತ ವಾದಿಸುತ್ತಾರೆ.

9. ಹಾಗೆ ವಾದವನ್ನು ಮಂಡಿಸುತ್ತಾ ಒಪ್ಪಂದ ಪತ್ರದಲ್ಲಿ ಮಾರ್ಚ್2019 ಅಂತ ನಮೂದಿಸಿದ್ದರೂ ಕೂಡಾ ವಿಳಂಬವಾಗಲು ಕಾರಣಗಳೇನು ಅಂತ ನೋಡಬೇಕು ಅಂತ ಹೇಳುತ್ತಾರೆ. ಈ ಸಂಬಂಧ ಡೆವಲಪರ್ ಪರ ಸಲ್ಲಿಸಿರುವ ತಕರಾರಿನ ಪ್ಯಾರಾ ನಂ. 8ರಲ್ಲಿ ಹೀಗೆ ಹೇಲುತ್ತಾರೆ.

> *It is also important to submit that the construction of basement still it was partially completed in tower 5 and however, due to long time taken in the proceeding for obtaining the required orders from NGT (National Green Tribunal) amongst other the developer has got delayed in completing the project undertaken. Finally due to the NGT order which was given after the plan sanctioned, regarding the Nala/buffer the respondent become unable to proceed further with the construction of tower no. 5 which is part of sanctioned plan and getting statutory approval and as the same become impossible for said tower, the respondent was constrained to drop the plan of further construction of tower no. 5. Accordingly, respondent was constrained to send email on 2/12/2018 , the said aspect to all the consumers who have booked apartments in the said tower No. 5, including the complainant herein that the developer is cancelling all the booking of the apartment said tower NO. 5 and it is willingness to ready to refund the amount in view of the NGT post plan sanction order. Thus the completion of the aforesaid project got some delay which was the beyond control of the respondent. However the respondent has already sent the letter of intimation to all of its consumers of the said project for getting registered the apartment booked by them by paying the demanded balance amount and the respondent never deny the delay compensation liable to payable it on considering the matter of respective intended purchaser of apartment.*

26/05/2020

NOT AN OFFICIAL COPY

10. ಮೇಲೆ ಹೇಳಿದ ಕಾರಣವಲ್ಲದೆ ರಾಜ್ಯದಲ್ಲಿ ನಡೆದ ಮುಷ್ಕರಗಳು, *Demonetisation* ಮತ್ತು ಇತರೆ ಕಾರಣಗಳಿಂದಾಗಿ ತನ್ನ ಪ್ರಾಜೆಕ್ಟ್‌ನ ಕೆಲಸದಲ್ಲಿ ವಿಳಂಬವಾಗಿರುತ್ತದೆ ಎನ್ನುವುದನ್ನು ಕೂಡಾ ಗಮನದಲ್ಲಿಟ್ಟುಕೊಳ್ಳಬೇಕಾಗುತ್ತದೆ. ಈ ಪ್ರಾಜೆಕ್ಟ್‌ನ ಕೆಲವು ಗ್ರಾಹಕರು ಮಾತ್ರ ಅಂದರೆ ಗ್ರಾಹಕರ ನಿಲುವನ್ನು ಮಾತ್ರ ಕೇಳದೆ ಡೆವಲಪರ್ ಇವರ ಕಷ್ಟಗಳ ಬಗ್ಗೆ ಕೂಡಾ ನೋಡಬೇಕು ಎಂದು ಹೇಳುತ್ತಾರೆ. ಒಪ್ಪಂದ ಪತ್ರದಲ್ಲಿರುವ ನಿಬಂಧನೆಗಳಿಗೆ ಒಪ್ಪಿಕೊಂಡೇ ಫಿರ್ಯಾದುದಾರರು ಸಹಿ ಮಾಡಿ ಕೊಟ್ಟಿರುವುದರಿಂದ ಈಗ ಅವರು ಡೆವಲಪರ್ ವಿರುದ್ಧ ಹೇಳುವುದೇನೂ ಇಲ್ಲ ಎಂದು ವಾದಿಸುತ್ತಾರೆ.

11. ಆದರೆ ರೇರಾ ಕಾಯ್ದೆ ಕಲಂ 18ರ ಪ್ರಕಾರ ಯಾವ ಡೆವಲಪರ್ ಇವರು ತಮ್ಮ ಪ್ರಾಜೆಕ್ಟ್ ಅನ್ನು ಒಪ್ಪಂದ ಪತ್ರದಲ್ಲಿ ಹೇಳಿದ ದಿನಾಂಕದ ಒಳಗೆ ಮುಗಿಸಲು ಅಸಮರ್ಥರಾಗುತ್ತಾರೋ ಆಗ ಅವರು ಹಂಚಿಕೆದಾರರಿಗೆ ಪರಿಹಾರದ ಮೊತ್ತವನ್ನು ಕೊಡಲೇ ಬೇಕಾಗುತ್ತದೆ. ಡೆವಲಪರ್ ಇವರು ಫಿರ್ಯಾದುದಾರರಿಗೆಕಳುಹಿಸಿದ ಮೇಲ್ ಗಳನ್ನು ನೋಡಿಕೊಂಡಾಗ ಯುನಿಟ್ ನಿಮಿತ್ತ ತಮಗೆ ಬರಬೇಕಾಗಿರುವ ಬಾಕಿ  ಹಣವನ್ನು ಕೊಡುವಂತೆ ಗ್ರಾಹಕರಿಗೆ ಒತ್ತಾಯಪಡಿಸುತ್ತಿದ್ದಾರೆ. ಅದೇ ರೀತಿ ರೇರಾ ಕಾಯ್ದೆ ಕಲಂ 18ರ ಪ್ರಕಾರ ಇರುವ ಅವರ ಬಾಧ್ಯತೆಯನ್ನು ಪೂರ್ಣಗೊಳಿಸಬೇಕಾಗುತ್ತದೆ. ಅಲ್ಲಿಗೆ ವಿಳಮಬದ ಪರಿಹಾರವನ್ನು ಅವರು ಕೊಡಲು ಬದ್ಧರಿರುತ್ತಾರೆ.

12. ಅಂತಿಮ ಆದೇಶ ಬರೆಯುವ ಮೊದಲು ಒಂದು ಮಾತು. ರೇರಾ ಕಾಯ್ದೆ ಕಲಂ 71(2) ಪ್ರಕಾರ ಫಿರ್ಯಾದುಗಳನ್ನು 60 ದಿನಗಳ ಒಳಗೆ ಇತ್ಯರ್ಥ ಪಡಿಸಬೇಕು. ಒಂದು ವೇಳೆ ಇತ್ಯರ್ಥ ಪಡಿಸಲು ಸಾಧ್ಯವಾಗದಿದ್ದರೆ ಅದಕ್ಕೆ ಪ್ರಾಧಿಕಾರವು ಕಾರಣಗಳನ್ನು ನೀಡಬೇಕಾಗುತ್ತದೆ. ಈ ಫಿರ್ಯಾದನ್ನು ದಿನಾಂಕ: 03/11/2019 ರಲ್ಲಿ ಸಲ್ಲಿಸಲಾಗಿದೆ. ಈ ಪ್ರಾಧಿಕಾರದ ಮುಂದೆ ಈ ಪ್ರಕರಣದಲ್ಲಿ ಪಕ್ಷಕಾರರು ದಿನಾಂಕ: 10/12/2019ರಂದು ಹಾಜರಾಗಿದ್ದಾರೆ. ಡೆವಲಪರ್ ಪರ ವಕೀಲರು ಹಾಜರಾಗಿ ತಮ್ಮ ತಕರಾರು ಸಲ್ಲಿಸಿದ್ದಾರೆ. ವಾದ ಮಂಡಿಸುವ ಸಂದರ್ಭದಲ್ಲಿ ನಿಯಮ 30 ರಂತೆ ಅರ್ಜಿ ಸಲ್ಲಿಸಿದ್ದಾರೆ. ಅದರ ಮೇಲೆ ವಾದ ಕೇಳಿ ಆದೇಶಕ್ಕೆ ಇಡಲಾಯಿತು.

26/05/2020

NOT AN OFFICIAL COPY

ನಂತರ ಡೆವಲಪರ್ ಪರ ವಕೀಲರು ತಮ್ಮ ವಾದವನ್ನು ಮಂಡಿಸಿದ್ದಾರೆ. ಅನೇಕ ತಾಂತ್ರಿಕ ಕಾರಣವನ್ನು ನೀಡಿ ಫಿರ್ಯಾದು ನಿಲ್ಲತಕ್ಕದ್ದಲ್ಲ ಎಂದು ವಾದಿಸುತ್ತಾರೆ. ಅವುಗಳಿಗೆ ಉತ್ತರ ನೀಡಿ ನಂತರ ಈ ಪ್ರಕರಣವನ್ನು ತೀರ್ಪಿಗೆಂದು ಇಡಲಾಗಿತ್ತು. ಈ ನಡುವೆ ದಿನಾಂಕ: 16/03/2020ರಿಂದ ಕೊರೋನಾ ಸಾಂಕ್ರಾಮಿಕ ರೋಗದ ಹಿನ್ನಲೆಯಲ್ಲಿ ತೆಗೆದುಕೊಂಡ ಮುನ್ನೆಚ್ಚರಿಕೆಯ ಕ್ರಮವಾಗಿ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವ ಸಲುವಾಗಿ ಕಡತಗಳ ಮೇಲಿನ ವಿಚಾರಣೆಯನ್ನು ಸ್ಥಗಿತಗೊಳಿಸಲಾಗಿತ್ತು. ದಿನಾಂಕ: 24/03/2020ರಿಂದ ದಿನಾಂಕ: 17/05/2020ರ ವರೆಗೆ ರಾಜ್ಯ ಸರ್ಕಾರವು ಲಾಕ್‌ಡೌನ್ ಘೋಷಿಸಿದ್ದರ ಹಿನ್ನೆಲೆಯಲ್ಲಿ ನಂತರದಲ್ಲಿ ಪ್ರಕರಣವನ್ನು ಕೈಗೆತ್ತಿಕೊಂಡು ಈಗ ತೀರ್ಪನ್ನು ಪ್ರಕಟಿಸಲಾಗುತ್ತಿದೆ. ಆದ್ದರಿಂದ ಈ ಕೆಳಕಂಡಂತೆ ಆದೇಶ:

## ಆದೇಶ

ಮೇಲೆ ಚರ್ಚಿಸಿದ ಕಾರಣಗಳಿಗಾಗಿ ಫಿರ್ಯಾದು ಸಂಖ್ಯೆ: **CMP/191103/0004609** ಅನ್ನು ಭಾಗಶಃ ಮಂಜೂರುಗೊಳಿಸಿದೆ.

1. ಫಿರ್ಯಾದುದಾರರು ಡೆವಲಪರ್‌ಗೆ ಫ್ಲಾಟ್ ನಂ.12.03.01 ಖರೀದಿಸುವ ನಿಮಿತ್ತ ಕೊಟ್ಟಿರುವ ಪೂರ್ಣ ಹಣದ ಮೇಲೆ ಅನ್ವಯವಾಗುವಂತೆ *State Bank of India* ಅವರು ಗೃಹ ಸಾಲಕ್ಕೆ ಈ ದಿನದಂದು ನಿಗದಿ ಪಡಿಸಿರುವ ಬಡ್ಡಿಗಿಂತ ಶೇಕಡಾ 2% ರಷ್ಟು ಹೆಚ್ಚುವರಿ ಬಡ್ಡಿಯನ್ನು ಏಪ್ರಿಲ್ 2019ರಿಂದ ಡೆವಲಪರ್ ಇವರು *Occupancy Certificate* ಪಡೆದುಕೊಂಡು ಸ್ವಾಧೀನ ಕೊಡುವ ದಿನಾಂಕದವರೆಗೆ ಕೊಡುವಂತೆ ಆದೇಶಿಸಿದೆ.
2. ವ್ಯಾಜ್ಯದ ಖರ್ಚು ಅಂತ ಡೆವಲಪರ್ ಇವರು ರೂ. 5,000/-ಗಳನ್ನು ಕೊಡುವುದು.
3. ಪಕ್ಷಕಾರರಿಗೆ ಈ ಆದೇಶದ ಬಗ್ಗೆ ಮಾಹಿತಿಕೊಡುವುದು.

[ಈ ತೀರ್ಪನ್ನು ಬೆರಳಚ್ಚುಗಾರರಿಗೆ ನೇರವಾಗಿ ಬೆರಳಚ್ಚು ಮಾಡುವ ಮೂಲಕ ದಿನಾಂಕ: 26.05.2020 ರಂದು ಪ್ರಕಟಿಸಲಾಗಿದೆ].

(ಕೆ. ಪಾಲಾಕ್ಷಪ್ಪ)
Adjudicating officer

NOT AN OFFICIAL COPY